# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 847 (831)

ಮಾನ್ಯ ಸದಸ್ಯರ ಹೆಸರು: ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 15.12.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಶಾಲೆಗಳಿಗೆ ಸರಿಸಮಾನವಾಗಿ ಸರ್ಕಾರಿ ಶಾಲೆಗಳಲ್ಲಿ ಕಲಿಕಾ ಫಲಿತಾಂಶ ಮತ್ತು ಬೋಧನಾ ಗುಣಮಟ್ಟವನ್ನು ಸುಧಾರಿಸಲು ಸರ್ಕಾರ ಸುಧಾರಣೆಗಳನ್ನು ಕೈಗೊಂಡಿದೆಯೇ; | ಹೌದು<br>• ಪೂರ್ವ ಪ್ರಾಥಮಿಕ ಶಿಕ್ಷಣದಿಂದ ಪದವಿ ಪೂರ್ವ ಶಿಕ್ಷಣದವರೆಗೆ ಒಂದೇ ಸೂರಿನಡಿ ಶಿಕ್ಷಣ ಪಡೆಯುವ ಸಲುವಾಗಿ 309 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ.<br>• 2025-26ನೇ ಸಾಲಿನಲ್ಲಿ ಎ.ಡಿ.ಬಿ. ನೆರವಿನೊಂದಿಗೆ 500 ಶಾಲೆಗಳನ್ನು ಕೆ.ಪಿ.ಎಸ್ ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲು ಯೋಜಿಸಿದ್ದು ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂಪಿಇ 2024, ಬೆಂಗಳೂರು ದಿನಾಂಕ: 15-10-2025 ರಲ್ಲಿ 474 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳಾಗಿ ಉನ್ನತೀಕರಿಸಲು ಆದೇಶಿಸಿದೆ.<br>• ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂ.ಪಿ.ಇ 2025, ಬೆಂಗಳೂರು ದಿನಾಂಕ: 28-11-2025 ರಲ್ಲಿ ಕಲ್ಯಾಣ ಕರ್ನಾಟಕದ ಅಕ್ಷರ ಆವಿಷ್ಕಾರ ಯೋಜನೆಯಡಿಯಲ್ಲಿ 200 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳಾಗಿ ಉನ್ನತೀಕರಿಸಲು ಆದೇಶಿಸಿದೆ.<br>• ಎಸ್.ಎಸ್.ಎಲ್.ಸಿ. ಫಲಿತಾಂಶ ಉತ್ತಮ |

| | | |
|---|---|---|
| | | ಪಡಿಸುವ ಸಲುವಾಗಿ ವಿಷಯವಾರು ನೀಲನಕ್ಷೆ ರಚಿಸಿ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ.<br><br>• ವಿದ್ಯಾರ್ಥಿಗಳನ್ನು ಪರೀಕ್ಷೆಗಳಿಗೆ ಸಜ್ಜುಗೊಳಿಸಲು DSERT ಸಹಯೋಗದೊಂದಿಗೆ ಮಂಡಳಿಯು ಜಿಲ್ಲಾವಾರು ವಿಷಯವಾರು ಪುನಶ್ಚೇತನ ತರಬೇತಿಗಳನ್ನು ನಡೆಸಲಾಗಿದೆ.<br><br>• ವಿದ್ಯಾರ್ಥಿಗಳಿಗೆ ಪುನರಾವರ್ತನೆ ಮತ್ತು ಪೂರ್ವ ಸಿದ್ಧತಾ ಪರೀಕ್ಷೆಗಳನ್ನು ನಡೆಸಲು ಅಗತ್ಯ ತಯಾರಿ ನಡೆಸಿದೆ.<br><br>• ಶತಮಾನ ಪೂರೈಸಿದ ಶಾಲೆಗಳನ್ನು ಪಾರಂಪರಿಕ ಶಾಲೆಗಳೆಂದು ಗುರ್ತಿಸಿ ಶಾಲಾ ನವೀಕರಣಕ್ಕಾಗಿ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br><br>• ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1 ನೇ ತರಗತಿಯಿಂದ ಪ್ರಸ್ತುತ ಇರುವ ಕನ್ನಡ /ಇತರೆ ಮಾಧ್ಯಮದ ಜೊತೆಗೆ ಒಟ್ಟು 9522 ಆಂಗ್ಲ, (ದ್ವಿಭಾಷಾ) (Bilingual) ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿರುತ್ತದೆ.<br><br>• 2024-25ನೇ ಸಾಲಿಗೆ 59 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7ನೇ ತರಗತಿ) ಶಾಲೆಗಳನ್ನಾಗಿ ಮತ್ತು 91 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ. |

| | | |
|---|---|---|
| | | • 2025-26ನೇ ಸಾಲಿಗೆ 06 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7 ಮತ್ತು 8ನೇ ತರಗತಿ) ಶಾಲೆಗಳನ್ನಾಗಿ ಮತ್ತು 01 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು 8ನೇ ತರಗತಿಯವರೆಗೆ ಹೀಗೆ ಒಟ್ಟು 07 ಶಾಲೆಗಳನ್ನು ಉನ್ನತೀಕರಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.<br><br>• ದಾಖಲಾತಿ ಆಂದೋಲನ, ಸೇತುಬಂಧ ಹಾಗೂ ಮಿಂಚಿನ ಸಂಚಾರ ಕಾರ್ಯಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಸುತ್ತೋಲೆ ಹೊರಡಿಸಲಾಗಿದೆ<br><br>• ಶೈಕ್ಷಣಿಕ ಸ್ಥಿತಿಗತಿಗಳಿಗೆ ಅನುಗುಣವಾಗಿ ಕಲಿಕಾ ಶೈಲಿಯ ಬದಲಾವಣೆ, ಆಧುನಿಕ ಕಲಿಕಾ ವಿಧಾನಗಳ ಅಳವಡಿಕೆ, ಮೂಲಭೂತ ಸೌಕರ್ಯಗಳು ಹಾಗೂ ಶಿಕ್ಷಕರ ಕೊರತೆ ಇಲ್ಲದಂತೆ ನೋಡಿಕೊಳ್ಳುವುದರೊಂದಿಗೆ ಸರ್ಕಾರಿ ಶಾಲೆಗಳಲ್ಲಿ ಬೋಧನಾ ಗುಣಮಟ್ಟ ಮತ್ತು ಕಲಿಕಾ ಫಲಿತಾಂಶವನ್ನು ಸುಧಾರಿಸಲು ಪಠ್ಯ ಆಧಾರಿತ ಮೌಲ್ಯ ಮಾಪನವನ್ನು (Lesson Based Assesement) ಜಾರಿಗೊಳಿಸಲಾಗಿದೆ. |
| ಆ) | ಕರ್ನಾಟಕ ಎಲ್ಲಾ ಜಿಲ್ಲೆಗಳಲ್ಲಿ XI ಮತ್ತು XII ತರಗತಿಗಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ಒಟ್ಟು ದಾಖಲಾತಿ ಸುಧಾರಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ; | ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ XI ಮತ್ತು XII ತರಗತಿಗಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ಒಟ್ಟು ದಾಖಲಾತಿ ಸುಧಾರಿಸಲು ವಿವಿಧ ಕಾರ್ಯತಂತ್ರಗಳು ಈ ಕೆಳಕಂಡಂತಿವೆ:-<br>• ಸಮೀಕ್ಷೆಯಲ್ಲಿ ಗುರುತಿಸಲಾದ ಬೀದಿ ಮಕ್ಕಳು, ಚಿಂದಿ ಆಯುವವರು, ಬಾಲ ಕಾರ್ಮಿಕರು, |

| | | |
|---|---|---|
| | | ಅನಾರೋಗ್ಯ ಪೀಡಿತ ಮಕ್ಕಳು, ವಿಶೇಷ ಅಗತ್ಯವಿರುವ ಮಕ್ಕಳು, ಅನಾಥರು, ಇತರ ರಾಜ್ಯಗಳು ಅಥವಾ ಜಿಲ್ಲೆಗಳಿಂದ ವಲಸೆ ಬಂದ ಮಕ್ಕಳಿಗೆ ಅಗತ್ಯ ತರಬೇತಿ ನೀಡಿ ಕಲಿಕೆಯ ಮಟ್ಟವನ್ನು ಆಧರಿಸಿ, ಕೆಕೆಜಿಬಿವಿ ವಸತಿ ನಿಲಯಗಳಲ್ಲಿ (Hostels) ದಾಖಲಿಸಲಾಗುತ್ತಿದೆ.<br>• ಶಾಲೆ ಬಿಡುವ ಮಕ್ಕಳ ಪ್ರಮಾಣವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಡಿಯಲ್ಲಿ ಪ್ರವೇಶ ಅವಕಾಶವಿಲ್ಲದ ಪ್ರದೇಶಗಳಲ್ಲಿ ಹೊಸ ಸರ್ಕಾರಿ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ, ಜೊತೆಗೆ ಅಸ್ತಿತ್ವದಲ್ಲಿರುವ ಪ್ರೌಢಶಾಲೆಗಳನ್ನು ಪದವಿ ಪೂರ್ವ ಕಾಲೇಜಿಗೆ (XI & XII ತರಗತಿ) ಗೆ ಉನ್ನತೀಕರಿಸಲಾಗುತ್ತದೆ. ಎಲ್ಲಾ ಮಕ್ಕಳಿಗೆ ಸಾರ್ವತ್ರಿಕ ಶಿಕ್ಷಣ ಪ್ರವೇಶಕ್ಕೆ ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಇದು ಒಂದು ನಿರ್ಣಾಯಕ ಹೆಜ್ಜೆಯಾಗಿದೆ.<br>• 2024-25 ರಲ್ಲಿ 16 ರಿಂದ 19 ವಯೋಮಾನದ ಶಾಲೆಯಿಂದ ಹೊರಗುಳಿದ ಹಾಗೂ ದಾಖಲಾಗದ ಮಕ್ಕಳಿಗೆ ರಾಷ್ಟ್ರೀಯ ಮುಕ್ತ ಶಾಲಾ ವ್ಯವಸ್ಥೆಯ (NIOS) ಮೂಲಕ ಪರೀಕ್ಷೆಗೆ ನೋಂದಣಿ ಮಾಡಲು ಬ್ಲಾಕ್ ಹಂತದಲ್ಲಿ KPS ಶಾಲೆಗಳು ಮತ್ತು ಜೂನಿಯರ್ ಕಾಲೇಜುಗಳಲ್ಲಿ 220 ಅಧ್ಯಯನ ಕೇಂದ್ರಗಳನ್ನು ಗುರುತಿಸಲಾಗಿದೆ.<br>• ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸುವ ಉದ್ದೇಶದಿಂದ, ಕೇಂದ್ರ ಶಿಕ್ಷಣ ಮಂತ್ರಾಲಯದಿಂದ ಮೂಲ ಸೌಕರ್ಯ ಅಗತ್ಯಗಳಿಗೆ ಅನುಗುಣವಾಗಿ ಶೌಚಾಲಯಗಳ ನಿರ್ಮಾಣ, ದುರಸ್ತಿ ಹಾಗೂ ಹೊಸ ತರಗತಿ |

| | | |
|---|---|---|
| | | ಕೊಠಡಿಗಳ ನಿರ್ಮಾಣ ಕಾರ್ಯಗಳು ಪ್ರಗತಿಯಲ್ಲಿವೆ.<br><br>• ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸುವ ಉದ್ದೇಶದಿಂದ 2018-19 ರಿಂದ ಕರ್ನಾಟಕ ಪಬ್ಲಿಕ್ ಶಾಲೆಗಳ (KPS) ನ್ನು ಆರಂಭಿಸಲಾಗಿದೆ. ಪೂರ್ವ ಪ್ರಾಥಮಿಕದಿಂದ 12ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ಉದ್ದೇಶದಿಂದ, 'ಪ್ರತಿ ಮಗುವೂ ಶಾಲೆಯಲ್ಲಿ ಇರಬೇಕು ಮತ್ತು ಚೆನ್ನಾಗಿ ಕಲಿಯಬೇಕು' ಎಂಬ ನೀತಿಗೆ ಅನುಗುಣವಾಗಿ, ಅಸ್ತಿತ್ವದಲ್ಲಿರುವ ಶಾಲೆಗಳ ಆಡಳಿತಾತ್ಮಕ, ಶೈಕ್ಷಣಿಕ ಮತ್ತು ಕಾರ್ಯಾತ್ಮಕ ಏಕೀಕರಣ ಮಾಡಲಾಗಿದೆ. ಈ ಶಾಲೆಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್ ಎರಡೂ ಬೋಧನಾ ಮಾಧ್ಯಮಗಳನ್ನು ಕೆಪಿಎಸ್ ಶಾಲೆಗಳಲ್ಲಿ ಅಳವಡಿಸಲಾಗಿದೆ. 309 ಪ್ರಸ್ತುತ ಕಾರ್ಯನಿರ್ವಹಿಸುತ್ತಿದ್ದು, ಇನ್ನೂ 474 ಶಾಲೆಗಳು ಶೀಘ್ರದಲ್ಲಿ ಪ್ರಾರಂಭವಾಗಲಿವೆ.<br><br>• ಅದೇ ರೀತಿ, ಕೇಂದ್ರ ಶಿಕ್ಷಣ ಮಂತ್ರಾಲಯದಿಂದ 585 ಪಿಎಂ ಶ್ರೀ. ಶಾಲೆಗಳು ಕೂಡ ಎಲ್‌ಕೆಜಿಯಿಂದ ಪಿಯುಸಿವರೆಗೆ ಕನ್ನಡ ಮತ್ತು ಇಂಗ್ಲೀಷ್ ಎರಡೂ ಬೋಧನಾ ಮಾಧ್ಯಮಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ಶಾಲೆ ಬಿಡುವ ಮಕ್ಕಳನ್ನು ಗುರುತಿಸುವ, ದಾಖಲಿಸುವ ಮತ್ತು ಶೈಕ್ಷಣಿಕ ಮುಖ್ಯವಾಹಿನಿಗೆ ತರುವ ಕಾರ್ಯವು ನಿರಂತರ ಪ್ರಕ್ರಿಯೆಯಾಗಿದ್ದು, ಈ ಸಂಬಂಧ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ. |

| | | |
|---|---|---|
| ಇ) | ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳ ಮೂಲ ಸೌಕರ್ಯಗಳನ್ನು ಖಾಸಗಿ ಶಾಲೆಗಳಿಗೆ ಸಮಾನವಾಗಿ ತರಲು, ಸರ್ಕಾರ ಮಾರ್ಗಸೂಚಿಯನ್ನು ಸಿದ್ಧಪಡಿಸಿದೆಯೇ; | ಸರ್ಕಾರಿ ಶಾಲೆಗಳ ಮೂಲಭೂತ ಸೌಕರ್ಯಗಳನ್ನು ಉತ್ತಮಪಡಿಸಲು 2025-26ನೇ ಸಾಲಿಗೆ ರಾಜ್ಯವಲಯ ಮುಂದುವರೆದ ಯೋಜನೆಯಡಿ ಸರ್ಕಾರಿ ಶಾಲಾ ಕೊಠಡಿಗಳ ನಿರ್ಮಾಣಕ್ಕಾಗಿ ರೂ.36000.00 ಲಕ್ಷಗಳು, ಸರ್ಕಾರಿ ಶಾಲೆಗಳಲ್ಲಿನ ಕೊಠಡಿಗಳ ದುರಸ್ತಿ ಕಾಮಗಾರಿಗೆ ರೂ.10000.00 ಲಕ್ಷಗಳು ಹಾಗೂ ಶೌಚಾಲಯ ನಿರ್ಮಾಣಕ್ಕಾಗಿ ರೂ.9000.00 ಲಕ್ಷಗಳ ಅನುದಾನ ನಿಗದಿಯಾಗಿದ್ದು ಕ್ರಿಯಾಯೋಜನೆ ಅನುಮೋದನೆಗೊಳ್ಳುವ ಪ್ರಕ್ರಿಯೆಯಲ್ಲಿದೆ. |
| ಈ) | ಅಲ್ಪಸಂಖ್ಯಾತ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳ ಮಕ್ಕಳ ದಾಖಲಾತಿ ಸುಧಾರಿಸಲು ಇಲಾಖೆ ವಿಶೇಷ ಕ್ರಮಗಳನ್ನು ಪ್ರಾರಂಭಿಸಿದೆಯೇ?. | ಅಲ್ಪಸಂಖ್ಯಾತ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳ ಮಕ್ಕಳೂ ಸೇರಿದಂತೆ ಎಲ್ಲಾ ಸಮುದಾಯಗಳ ಮಕ್ಕಳ ದಾಖಲಾತಿ ಸುಧಾರಿಸಲು ಇಲಾಖೆಯಿಂದ ಈ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ.<br><br>**ಸರ್ಕಾರಿ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಲು ತೆಗೆದುಕೊಂಡ ಕ್ರಮಗಳು:-**<br>• ಸರ್ಕಾರಿ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರಿ ಶಾಲೆಗಳಿಗೆ ಅನ್ನಭಾಗ್ಯ, ಕ್ಷೀರಭಾಗ್ಯ ಪಠ್ಯಪುಸ್ತಕ ಸಮವಸ್ತ್ರ, ಮುಂತಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>• ಪಿ.ಟಿ.ಆರ್. ಆಧಾರದಲ್ಲಿ ಅಗತ್ಯ ಸಂಖ್ಯೆಯ ಶಿಕ್ಷಕರನ್ನು ಒದಗಿಸಲಾಗುತ್ತಿದೆ.<br>• ಕನ್ನಡ ಮಾಧ್ಯಮ ಪ್ರೌಢ ಶಾಲೆಗಳಲ್ಲಿ ಬೇಡಿಕೆ ಇದ್ದಲ್ಲಿ ಅರ್ಹತೆ ಅನುಸಾರ ಆಂಗ್ಲ ಮಾಧ್ಯಮ |

| | | |
|---|---|---|
| | | ತರಗತಿಗಳನ್ನು ಪ್ರಾರಂಭಿಸಲಾಗಿದೆ.<br><br>• 2025-26ನೇ ಸಾಲಿನಲ್ಲಿ 182 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಸರ್ಕಾರಿ ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಿ ಆದೇಶಿಸಿದೆ.<br><br>• 2025-26ನೇ ಸಾಲಿನಲ್ಲಿ ಎ.ಡಿ.ಬಿ. ನೆರವಿನೊಂದಿಗೆ 500 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲು ಯೋಜಿಸಿದ್ದು ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂ.ಪಿ.ಇ 2024, ಬೆಂಗಳೂರು ದಿನಾಂಕ:15/10/2025 ರಲ್ಲಿ 474 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br><br>• ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂಪಿಇ 2025, ಬೆಂಗಳೂರು ದಿನಾಂಕ: 28.11.2025 ಕಲ್ಯಾಣ ಕರ್ನಾಟಕದ ಅಕ್ಷರ ಆವಿಷ್ಕಾರ ಯೋಜನೆಯಡಿಯಲ್ಲಿ 200 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br><br>• 2026-27ನೇ ಸಾಲಿನಲ್ಲಿ ದಾಖಲಾತಿ ಹೆಚ್ಚಿಸಲು ದಾಖಲಾತಿ ಆಂದೋಲನ ನಡೆಸಲು ಸುತ್ತೋಲೆ ಹೊರಡಿಸಲಾಗಿದೆ (ಸಂಖ್ಯೆ: ಇಪಿ 98 ಎಂಪಿಇ 2025, ದಿನಾಂಕ: 13.11.2025). |

**ಇಪಿ 152 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು